ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTEEXAM0ECS3/8/2022

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 12-01-2023.

## ಜ್ಞಾಪನ

ವಿಷಯ : 2009-10,2010-11,2011-12,2012-13 ಮತ್ತು 2013-14 ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12,2012-13,2013-14,2014-15,2015-16 ಮತ್ತು 2016-17ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗ

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 147 ಟಿಪಿಇ 2022, ದಿನಾಂಕ:11-01-2023.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ(1)ರ ಸರ್ಕಾರದ ಪತ್ರದಲ್ಲಿ **"2009-10ನೇ ಸಾಲಿನಿಂದ 2013-14ನೇ ಶೈಕ್ಷಣಿಕ ಸಾಲಿನವರೆಗೆ ಮೊದಲನೇ ವರ್ಷದ ಡಿಪ್ಲೋಮಾಗೆ ಪ್ರವೇಶ ಪಡೆದ ಅಂದಾಜು 600 ವಿದ್ಯಾರ್ಥಿಗಳು ಹಾಗೂ 2011-12ನೇ ಸಾಲಿನಿಂದ 2016-17ನೇ ಸಾಲಿನವರೆಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷದ ಡಿಪ್ಲೊಮಾಗೆ ಪ್ರವೇಶ ಪಡೆದ ಅಂದಾಜು 250 ಐ.ಟಿ.ಐ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2022-23ನೇ ಸಾಲಿನ 2023ರ ಜನವರಿ/ಫೆಬ್ರವರಿ ಹಾಗೂ 2023ರ ಜೂನ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಸರ್ಕಾರದ ಅನುಮತಿ ನೀಡಲಾಗಿದೆ.**

ಮೇಲ್ಕಂಡ ಸರ್ಕಾರದ ಅನುಮತಿ ಹಿನ್ನೆಲೆಯಲ್ಲಿ ಮೇಲ್ಕಂಡ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ 2023ರ ಜನವರಿ/ಫೆಬ್ರವರಿ ಸೆಮಿಸ್ಟರ್ ಪರೀಕ್ಷೆಗೆ **ದಿನಾಂಕ: 12-01-2023** ರಿಂದ **18-01-2023** ರ ತನಕ (ದಂಡರಹಿತವಾಗಿ) ಪರೀಕ್ಷೆ ಶುಲ್ಕವನ್ನು ಪಾವತಿಸಿ ಪರೀಕ್ಷೆಯನ್ನು ಬರೆಯಲು ಅನುಮತಿಸಿದೆ.

ಮೇಲೆ ತಿಳಿಸಿರುವ ದಿನಾಂಕಗಳ ನಂತರ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಲಾಗುವುದಿಲ್ಲ ಸ್ಪಷ್ಟವಾಗಿ ತಿಳಿಸಲಾಗಿದೆ.

12/1/23

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ: ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ.

ಪ್ರತಿ:

1. ಆಪ್ತಶಾಖೆ, ಮಾನ್ಯ ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,ಬೆಂಗಳೂರು.
2. ಆಪ್ತಶಾಖೆ, ಮಾನ್ಯ ನಿರ್ದೇಶಕರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಇ-ಗವರ್ನೆನ್ಸ್ ವಿಭಾಗ - ವೆಬ್ ಸೈಟ್ ನಲ್ಲಿ ಪ್ರಕಟಿಸಲು
4. ಇ.ಎ.ಪಿ ವಿಭಾಗ.